**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

**ಸ್ಪೆಷಲ್ ಮೊಕದ್ದಮೆ ನಂಃ 123/2019**

| | | |
|---|---|---|
| ಸಾಕ್ಷಿದಾರರ ಹೆಸರು | - ಲೋಕೇಶಪ್ಪ | ಪಿಡಬ್ಲೂ - 08 |
| ತಂದೆಯ ಹೆಸರು | - ಸೋಮ್ಲಾನಾಯ್ಕ | ಸಿಡಬ್ಲೂ - 14 |
| ವಯಸ್ಸು | - 55 ವರ್ಷ | |
| ಉದ್ಯೋಗ | - ಎ.ಎಸ್.ಐ., ಲಕ್ಕವಳ್ಳಿ ಪೊಲೀಸ್ ಠಾಣೆ | |
| ವಾಸ ಸ್ಥಳ | - ಲಕ್ಕವಳ್ಳಿ | |

ದಿನಾಂಕಃ 29-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.-

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದಃ

1. ನಾನು ಫೆಬ್ರವರಿ 2019 ರಿಂದ ಜನವರಿ 2021 ರವರೆಗೆ ಬಾಳೆಹೊನ್ನೂರು ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 18-06-2019 ರಂದು ಚಾಸಾ.1 ರವರು ನನ್ನ ಸಮಕ್ಷಮ ಹಾಜರಾಗಿ ದೂರನ್ನು ನೀಡಿದ್ದು ಅದನ್ನು ಪಡೆದುಕೊಂಡಿದ್ದು ಸದರಿ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ನಿಪಿ.1 ರ ಆಧಾರದ ಮೇಲೆ ಈ ಪ್ರಕರಣದ ಗುನ್ನೆಯನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದು, ಸದರಿ ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು

ನಿಪಿ.10 ಎಂದು ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ.10(ಎ) ಎಂದು ಗುರುತಿಸಲಾಯಿತು. ವಿಶೇಷ ಪ್ರಕರಣವಾಗಿದ್ದರಿಂದ ಮುಂದಿನ ತನಿಖೆಯನ್ನು ಚಾಸಾ.15 ರವರಿಗೆ ಹಸ್ತಾಂತಿರಿಸಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿಯ ಪರವಾಗಿ ಶ್ರೀ ಹೆಚ್.ಎ.ಟಿ ವಕೀಲರಿಂದಃ -</u>

3. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಬರಲು ತಡವಾಗಿದ್ದರಿಂದ ತಡವಾಗಿ ಫಿರ್ಯಾದು ನೀಡಿರುತ್ತೇನೆ ಎಂದು ಫಿರ್ಯಾದುದಾರರು ಹೇಳಿರುತ್ತಾರೆ. ಅದನ್ನು ಪ್ರಥಮ ವರ್ತಮಾನ ವರದಿಯಲ್ಲಿ ನಮೂದು ಮಾಡಿರುತ್ತೇನೆ. ನನ್ನ ಮುಖ್ಯ ವಿಚಾರಣೆಯಲ್ಲಿ ಮತ್ತು ಪಾಟೀ ಸವಾಲಿನಲ್ಲಿ ಈವರೆಗೆ ಹೇಳಿದ ವಿಷಯ ಸುಳ್ಳು ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಓ.
ಸಹಿ/-
(ಕಿರಣ್ ಕಿಣಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ